# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 138 | Pages. 2 | Date: 06-05-2026, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 138 - ಪುಟಗಳು : 2 | 06-05-2026 | ಬುಧವಾರ | Ph: 8762954248 | ದರ : ₹1


# ಜಿಲ್ಲೆಯ 55 ವಿದ್ಯಾರ್ಥಿಗಳಿಗೆ ಇಂದು ಪುರಸ್ಕಾರ

## ಸರ್ಕಾರಿ ಶಾಲೆಗಳಿಗೂ ಅಭಿನಂದನೆ | ಸಚಿವ ಕೃಷ್ಣಬೈರೇಗೌಡ ನೇತೃತ್ವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಎಸ್ಎಸ್ಎಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಜಿಲ್ಲೆಯ 55 ವಿದ್ಯಾರ್ಥಿಗಳನ್ನು ಮೇ 6ರ ಬುಧವಾರ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಅಭಿನಂದಿಸಲಾಗುವುದು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅವರ ನೇತೃತ್ವದಲ್ಲಿ ಎಲ್ಲಾ ಜನಪ್ರತಿನಿಧಿಗಳ ಸಹಭಾಗಿತ್ವದಲ್ಲಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಕಳೆದ ವರ್ಷ ಜಿಲ್ಲೆ ಆರನೇ ಸ್ಥಾನದಲ್ಲಿತ್ತು. ಈ ಬಾರಿ ನಾಲ್ಕನೇ ಸ್ಥಾನದಲ್ಲಿದೆ. ಅನುತ್ತೀರ್ಣ ವಿದ್ಯಾರ್ಥಿಗಳನ್ನು ಮರುಪರೀಕ್ಷೆಗೆ ನೋಂದಾಯಿಸಲಾಗಿದ್ದು, ಎಲ್ಲಾ ವಿದ್ಯಾರ್ಥಿಗಳ ಉತ್ತೀರ್ಣತೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗಿದೆ ಎಂದರು.

ಜಿಲ್ಲೆಯಲ್ಲಿ ಒಟ್ಟು 536 ಶಾಲೆಗಳಲ್ಲಿ 241 ಸರ್ಕಾರಿ ಶಾಲೆ, 128 ಅನುದಾನಿತ ಶಾಲೆಗಳು ಹಾಗೂ 167 ಅನುದಾನ ರಹಿತ ಶಾಲೆಗಳಿವೆ. 19041 ವಿದ್ಯಾರ್ಥಿಗಳು ಎಸ್ಎಸ್ಎಲ್ಸಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದರು. 18566 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ ಎಂದರು.

ಸತತವಾಗಿ ಕಳೆದ 3 ವರ್ಷಗಳಿಂದ ಶೇ. 100 ರಷ್ಟು ಫಲಿತಾಂಶ ನೀಡುತ್ತಿರುವ ಶಾಲೆಗಳಿಗೂ ಸಹ ಅಭಿನಂದಿಸಿ ಪ್ರಶಂಸನಾ ಪತ್ರ ನೀಡಲಾಗುತ್ತಿದೆ ಎಂದರು.

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 14,577 ವಿದ್ಯಾರ್ಥಿಗಳಲ್ಲಿ 13,077 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಶೇ. 89.71 ಫಲಿತಾಂಶ ದಾಖಲಾಗಿದೆ. ಶೇ. 79.61 ರಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಫಲಿತಾಂಶ ಬಂದಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಜನಗಣತಿ ಕಾರ್ಯ ಶೇ.100ರಷ್ಟು ಪೂರ್ಣಗೊಂಡಿದ್ದು, ಜನಗಣತಿ ಕೆಲಸವನ್ನು ಗಣತಿದಾರರು ಹಾಗೂ ಮೇಲ್ವಿಚಾರಕರು ತುಂಬ ಶ್ರದ್ಧೆಯಿಂದ ಉತ್ತಮವಾಗಿ ಕಾರ್ಯನಿರ್ವಹಿಸಿದ ಶಿಕ್ಷಕರು ಮತ್ತು ಅಧಿಕಾರಿಗಳ




ಶ್ರಮಕ್ಕೆ ಜಿಲ್ಲಾಧಿಕಾರಿ ಅಭಿನಂದನೆ ಸಲ್ಲಿಸಿದರು.

### ವಾಡಿಕೆಗಿಂತ ಕಡಿಮೆ ಮಳೆ

ಜಿಲ್ಲೆಯಲ್ಲಿ ಈ ಬಾರಿ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು, ಕೆಲ ದಿನಗಳ ಹಿಂದೆ ಸುರಿದ ಗಾಳಿ ಮಳೆಗೆ ಓರ್ವ ಮಹಿಳೆ ಸೇರಿ 9 ಜಾನುವಾರು ಮೃತಪಟ್ಟಿದ್ದು, ಈಗಾಗಲೇ ಪರಿಹಾರ ವಿತರಿಸಲಾಗಿದೆ. ಮಾ.1 ರಿಂದ ಇಲ್ಲಿವರೆಗೆ 79.9 ಮಿ.ಮೀ. ಮಳೆಯಾಗಬೇಕಿತ್ತು. ಆದರೆ 55.2 ಮಿ.ಮೀ. ಮಳೆಯಾಗಿದೆ. ಆಲೂರು ತಾಲ್ಲೂಕಿನ ಮಾದಿಹಳ್ಳಿ ಗ್ರಾಮದ ನೀಲಮ್ಮ ಎಂಬುವರು ಕಳೆದ ತಿಂಗಳು ಸಿಡಿಲಿಗೆ ಬಲಿಯಾಗಿದ್ದು, ಮೃತರ ಕುಟುಂಬಕ್ಕೆ 5 ಲಕ್ಷ ರೂ. ಪರಿಹಾರ ವಿತರಿಸಲಾಗಿದೆ ಎಂದರು.

ಅದೇ ರೀತಿ ಮಳೆಯಿಂದ 5 ದನದ ಕೊಟ್ಟಿಗೆ ಹಾನಿಯಾಗಿವೆ. 34 ಮನೆ ಭಾಗಶಃ ಹಾನಿಯಾಗಿದ್ದು, ಒಂದು ಮನೆ ಸಂಪೂರ್ಣ ಕುಸಿದಿದೆ. ಭಾಗಶ: ಹಾನಿಯಾಗಿರುವ ಮನೆಗಳಿಗೆ 65 ಸಾವಿರ ರೂ. ಹಾಗೂ ಪೂರ್ಣ ಹಾನಿಯಾಗಿರುವ ಮನೆಗೆ 1.20 ಲಕ್ಷ ರೂ. ಪರಿಹಾರ ಪಾವತಿ ಮಾಡಲಾಗುವುದು ಎಂದು ಹೇಳಿದರು.

### ಭ್ರಷ್ಟಾಚಾರ: ದೂರು ನೀಡಿದರೆ ಪರಿಶೀಲನೆ

ಬೇಲೂರು-ಹಾಸನ ರೈಲ್ವೆ ಯೋಜನೆ ಭೂ ಸ್ವಾಧೀನದಲ್ಲಿ ಯಾವುದೇ ಸಮಸ್ಯೆ ಇಲ್ಲ, ವಿಳಂಬ ಕೂಡ ಆಗಿಲ್ಲ ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸ್ಪಷ್ಟಪಡಿಸಿದರು.

11.9 ಕಿ.ಮೀ. ಭೂಸ್ವಾಧೀನದಲ್ಲಿ ಯಾವುದೇ ಸಮಸ್ಯೆ ಇಲ್ಲ. ಆದರೆ ಹೆಚ್ಚುವರಿ ಭೂಮಿ ಕೇಳಿದ್ದರಿಂದ ತಾಂತ್ರಿಕ ತೊಂದರೆ ಎದುರಾಗಿವೆ. ಇದರಲ್ಲಿ ಭ್ರಷ್ಟಾಚಾರ ನಡೆದಿದ್ದರೆ, ಆ ಬಗ್ಗೆ ದೂರು ನೀಡಿದರೆ ಪರಿಶೀಲಿಸಲಾಗುವುದು. ಭೂಸ್ವಾಧೀನದಲ್ಲಿ ವಿಳಂಬ ಆಗಿಲ್ಲ ಎಂದು ನುಡಿದರು.

ಕಾಮಸಮುದ್ರ ಯೋಜನೆ ಸಂಬಂಧ ಭೂ ಕೋರಿಕೆ ಸಮಿತಿ ಇದ್ದು, ಅವರ ಕೋರಿಕೆ ಮೇರೆಗೆ ನಾವು ಕೆಲಸ ಮಾಡಬೇಕು. ನಾವೇ ಮುಂದಡಿ ಇಡಲು ಆಗಲ್ಲ ಎಂದರು. ಜಿಲ್ಲಾಧಿಕಾರಿ ಅಥವಾ ಎಸ್ಎಲ್ಒ ಅವರು ಭೂ ಪರಿಹಾರದ ಹಣ ಇಟ್ಟುಕೊಟ್ಟಲು ಆಗಲ್ಲ. ಯಾವುದೇ ಭೂ ಪರಿಹಾರದ ಹಣ ವಾಪಸ್ ಹೋಗಿಲ್ಲ ಎಂದರು.

ಬೇಸಿಗೆಯಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಆಗದಂತೆ ಈಗಾಗಲೇ ಜಿಲ್ಲಾಡಳಿತ ಎಚ್ಚರವಹಿಸಿ ಮುಂಜಾಗ್ರತಾ ಕ್ರಮ ಕೈಗೊಂಡಿದ್ದು, ಕುಡಿಯುವ ನೀರಿನ ಕುರಿತು ಸಮಸ್ಯೆ ಆಲಿಸಲು ಸಹಾಯವಾಣಿಯನ್ನು ಸಹ ತೆರೆಯಲಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ 6,56,156 ದೊಡ್ಡ ಜಾನುವಾರು ಮತ್ತು 3,28,445 ಸಣ್ಣ ಜಾನುವಾರುಗಳಿದ್ದು, ಜಿಲ್ಲೆಯಲ್ಲಿ 881,378 ಮೆಟ್ರಿಕ್ ಟನ್ ಮೇವು ಲಭ್ಯವಿದ್ದು ಮೇವಿನ ಸಮಸ್ಯೆಯಾಗದಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಶಾಸಕರ ನೇತೃತ್ವದಲ್ಲಿ ಟಾಸ್ಕ್ ಫೋರ್ಸ್ ಸಭೆ ನಡೆಸಲಾಗಿದ್ದು, ಜಿಲ್ಲೆಯಲ್ಲಿ ಯಾವುದೇ ರೀತಿಯಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಆಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ಎನ್. ಬಲರಾಮ್ ಹಾಗೂ ತಹಸಿಲ್ದಾರ್ ಗೀತಾ ಹಾಜರಿದ್ದರು.

# ಕ್ಯಾಪ್ಟನ್ ಅರ್ಜುನ ಸ್ಮಾರಕ ಲೋಕಾರ್ಪಣೆಗೆ ಕ್ಷಣಗಣನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಯಸಳೂರು ವ್ಯಾಪ್ತಿಯ ದಬ್ಬಳ್ಳಿಕಟ್ಟೆ ಅರಣ್ಯ ಪ್ರದೇಶದಲ್ಲಿರುವ ಅರ್ಜುನನ ಸಮಾಧಿ ಆವರಣದಲ್ಲಿ ನಿರ್ಮಾಣವಾಗಿರುವ ಅರ್ಜುನನ ಪ್ರತಿಮೆ ಮೇ 6ರ ಬುಧವಾರ ಲೋಕಾರ್ಪಣೆಯಾಗಲಿದೆ.

ಆ ಹಿನ್ನಲೆಯಲ್ಲಿ ಶಾಸಕ ಸಿಮೆಂಟ್ ಮಂಜು ಮಂಗಳವಾರ ಸ್ಥಳ ಪರಿಶೀಲಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕರು, ಈಗಾಗಲೇ ಅರ್ಜುನನ ಪ್ರತಿಮೆ ಉದ್ಘಾಟನೆಯಾಗುವುದು ವಿಳಂಬವಾಗಿದೆ. ಅರ್ಜುನನ ಫೈಬರ್ ಪ್ರತಿಮೆ ಮಾಡಿರುವುದು ಬೇಸರವಾಗಿದೆ. ಅರ್ಜುನನಿಗೆ ಕಂಚಿನ ಪ್ರತಿಮೆ ಮಾಡಿದ್ದರೆ ನಿಜವಾದ ಗೌರವ ಸಲ್ಲಿಸಿದಂತಾಗುತ್ತಿತ್ತು. ಈ ನಿಟ್ಟಿನಲ್ಲಿ ಅಲ್ಲದೆ ಸಮಾಧಿಗೆ ಹೋಗಲು ಡಾಂಬರ್ ರಸ್ತೆ ಇಲ್ಲ, ತಾತ್ಕಾಲಿಕವಾಗಿ ಇಲ್ಲಿ ಶೌಚಾಲಯದ ವ್ಯವಸ್ಥೆ ಮಾಡಲಾಗಿದ್ದು ಸರಿಯಾದ ರೀತಿಯ ಶೌಚಾಲಯ ಹಾಗೂ ವಿಶ್ರಾಂತಿ ಕೊಠಡಿ ನಿರ್ಮಾಣವಾಗಲು ಮುಂದಿನ ದಿನಗಳಲ್ಲಿ ಕ್ರಮ ಕೈಗೊಳ್ಳಬೇಕು. ಅರ್ಜುನನ ಕುರಿತು ಮಾಹಿತಿಯನ್ನು ಸಹ ಕಂಚಿನ ಫಲಕದಲ್ಲಿ ಹಾಕಬೇಕು ಮತ್ತು ಅರ್ಜುನನ ಸಮಾಧಿ ವೀಕ್ಷಣೆ ಮಾಡಲು ಬರುವ ಪ್ರವಾಸಿಗರಿಗೆ ಸೂಕ್ತ ರಕ್ಷಣಾ ವ್ಯವಸ್ಥೆ ಕಲ್ಪಿಸಬೇಕು. ಈ ಪ್ರದೇಶವು ಮುಂದಿನ ದಿನಗಳಲ್ಲಿ ಹೆಸರಾಂತ ಪ್ರವಾಸಿ ಸ್ಥಳವಾಗಬೇಕು. ಈ ನಿಟ್ಟಿನಲ್ಲಿ ಹೆಚ್ಚಿನ ಅನುದಾನ ಬಿಡುಗಡೆ ಮಾಡುವಂತೆ ಮಾನ್ಯ ಸಚಿವರಲ್ಲಿ ನಾನು ಮನವಿ ಮಾಡುತ್ತೇನೆ. ಜೊತೆಗೆ ತಾಲೂಕಿನಲ್ಲಿ ಉಂಟಾಗಿರುವ ಕಾಡಾನೆ ಸಮಸ್ಯೆ ಶಾಶ್ವತವಾಗಿ ಬಗೆಹರಿಸಬೇಕು ಹಾಗೂ ಬೆಳೆಗಾರರ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ಮುಂದಾಗಬೇಕು ಮತ್ತು ಅರ್ಜುನನ ಸಮಾಧಿ ಹೋರಾಟದಲ್ಲಿ 19 ಜನರ ಮೇಲೆ ದಾಖಲಾಗಿರುವ ಪ್ರಕರಣವನ್ನು ಸರ್ಕಾರ ಹಿಂಪಡೆಯಬೇಕೆಂದು ಸಚಿವರ ಬಳಿ ಮನವಿ ಮಾಡುತ್ತೇನೆ ಎಂದರು.

ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್ ಕುಮಾರ್ ಸೇರಿದಂತೆ ಇತರರು ಹಾಜರಿದ್ದರು.

# ರಾಜಘಟ್ಟದಲ್ಲಿ ಲಾರಿ ನಿಲುಗಡೆಗೆ ಅವಕಾಶ ಮಾಡಿಕೊಡಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ರಾಜಘಟ್ಟ ರೈಲ್ವೆ ನಿಲ್ದಾಣ ಸಮೀಪದ ಗೂಡ್ಸ್ ಶೆಡ್ ಪ್ರದೇಶದಲ್ಲಿ ಲಾರಿ ನಿಲ್ಲಿಸಲು ಅನುಮತಿ ನೀಡುವಂತೆ ಆಗ್ರಹಿಸಿ ನೂರಾರು ಲಾರಿ ಮಾಲೀಕರು ಮತ್ತು ಚಾಲಕರು ಮಂಗಳವಾರ ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್ ಅವರಿಗೆ ಮನವಿ ಸಲ್ಲಿಸಿದರು.



ಹಾಸನ ಗೂಡ್ಸ್ ಲಾರಿ ಮಾಲೀಕರ ಸಂಘದ ಜಿಲ್ಲಾಧ್ಯಕ್ಷ ಕೆ.ಟಿ. ಸುರೇಶ್ ಮತ್ತು ಶೇಕ್ ಅಹಮದ್ ಅವರು, ಸುಮಾರು 20-30 ವರ್ಷಗಳ ಹಿಂದೆ ಅಂದಿನ ಶಾಸಕ ಹೆಚ್.ಎಸ್. ಪ್ರಕಾಶ್ ಅವರ ಮುತುವರ್ಜಿಯಿಂದ ಅಂದಿನ ಡಿಸಿ ಅವರೊಂದಿಗೆ ಚರ್ಚಿಸಿ, ರಾಜಘಟ್ಟ ರಸ್ತೆ ಬಳಿಯ ಜಾಗವನ್ನು ಲಾರಿ ನಿಲುಗಡೆಗಾಗಿ ಕೊಡಿಸಿದ್ದರು.

ಅಂದಿನಿಂದ ಇಂದಿನವರೆಗೆ ಯಾವುದೇ ವ್ಯತ್ಯಯವಿಲ್ಲದೆ ಲಾರಿ ನಿಲ್ಲಿಸಿ ಕೊಂಡು, ವಿವಿಧ ಅಗತ್ಯ ವಸ್ತುಗಳ ಸಾಗಾಣಿಕೆ ಮಾಡುತ್ತಿದ್ದೆವು. ಪ್ರತಿದಿನ ರೈತರಿಗೆ ಅಗತ್ಯವಾದ ಗೊಬ್ಬರ, ಆಲೂಗಡ್ಡೆ ಸೇರಿದಂತೆ ಕೃಷಿ ಸಂಬಂಧಿತ ವಸ್ತುಗಳ ಜೊತೆಗೆ, ಜನಸಾಮಾನ್ಯರಿಗೆ ಬೇಕಾಗುವ ಅಕ್ಕಿ, ಸಿಮೆಂಟ್, ಕಟ್ಟಡ ಸಾಮಗ್ರಿ ಮತ್ತು ಇತರ ದಿನನಿತ್ಯ ಬಳಕೆಯ ವಸ್ತುಗಳನ್ನು ಇಲ್ಲಿಂದಲೇ ಸಾಗಿಸಲಾಗುತ್ತಿದೆ. ಇದರಿಂದ ರೈತರು ಹಾಗೂ ವ್ಯಾಪಾರಿಗಳಿಗೆ ಬಹಳಷ್ಟು ಅನುಕೂಲವಾಗುತ್ತಿದ್ದು, ಸರಬರಾಜು ವ್ಯವಸ್ಥೆಯೂ ಸುಗಮವಾಗಿದೆ.

ಈ ಜಾಗದಲ್ಲಿ ಯಾವುದೇ ಬಾಡಿಗೆ ಅಥವಾ ಹಣ ವಸೂಲಿ ಮಾಡುತ್ತಿಲ್ಲ. ಜೊತೆಗೆ ಯಾವುದೇ ಶಾಶ್ವತ ಕಟ್ಟಡ ನಿರ್ಮಿಸದೇ, ಕೇವಲ ಲಾರಿ ನಿಲುಗಡೆಗೆ ಮಾತ್ರ ಬಳಸಿಕೊಳ್ಳಲಾಗುತ್ತಿದೆ. ಈ ಮೂಲಕ ಸರ್ಕಾರಿ ನಿಯಮ ಉಲ್ಲಂಘಿಸದೇ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ಹೇಳಿದರು.

ರೈಲ್ವೆ ಅಧಿಕಾರಿಗಳೂ ಇದಕ್ಕೆ ಸಹಕಾರ ನೀಡುತ್ತಿದ್ದು, ಯಾವುದೇ ಅಡಚಣೆ ಇಲ್ಲದೆ ಲಾರಿಗಳ ಸಂಚಾರ ಮತ್ತು ನಿಲುಗಡೆ ನಡೆಯುತ್ತಿದೆ. ಪಕ್ಕದಲ್ಲಿ 1-06 ಗುಂಟೆ ಸರ್ಕಾರದ ಜಾಗವಿದ್ದು, ಹಲವು ವರ್ಷಗಳಿಂದ ಖಾಲಿ ಇರುವುದರಿಂದ ಆ ಜಾಗವನ್ನೂ ಸಹ ಲಾರಿ ನಿಲುಗಡೆಗಾಗಿ ಬಳಸಿಕೊಳ್ಳಲಾಗುತ್ತಿದೆ. ಆದರೀಗ ಈ ಜಾಗ ನಮ್ಮದೆಂದು ಹೇಳಿ ಈ ಜಾಗದಿಂದ ಹೋಗುವಂತೆ ನಮ್ಮ ಮೇಲೆ ಒತ್ತಡ ಏರಲಾಗುತ್ತಿದೆ. ಇದನ್ನು ತಪ್ಪಿಸಬೇಕು ಎಂದು ಮನವಿ ಮಾಡಿದರು.

ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಹಲವು ವರ್ಷಗಳಿಂದ ಬಳಕೆ ಮಾಡುತ್ತಿರುವುದರಿಂದ ಪ್ರಸ್ತುತ ಬಳಸುತ್ತಿರುವ ಗೂಡ್ಸ್ ಶೆಡ್ ಮತ್ತು ಪಕ್ಕದ ಸರ್ಕಾರಿ ಜಾಗದಲ್ಲಿಯೇ ಲಾರಿಗಳನ್ನು ನಿಲ್ಲಿಸಲು ಶಾಶ್ವತ ಅಥವಾ ತಾತ್ಕಾಲಿಕ ಅನುಮತಿ ನೀಡಬೇಕು ಮನವಿ ಮಾಡಿದರು.

ಹಾಸನ ಗೂಡ್ಸ್ ಲಾರಿ ಮಾಲೀಕರ ಸಂಘದ ಲೋಕೇಶ್, ಮಂಜುನಾಥ್, ಶೇಖರ್ ಕುಮಾರ್, ಸಂಜಯ್, ಬಲರಾಮ್, ಶಾರಕ್ ಕುಮಾರ್ ಮೊದಲಾದವರಿದ್ದರು.

# ಬಂಗಾಳದಲ್ಲಿ ಬಿಜೆಪಿ ಗೆಲುವು: ಸಿಮೆಂಟ್ ಮಂಜು ಸಂತಸ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪಶ್ಚಿಮ ಬಂಗಾಳದ ಗೆಲುವು ಭಾರತೀಯರ ಗೆಲುವಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಸಂತಸ ವ್ಯಕ್ತಪಡಿಸಿದರು.

ಪಂಚರಾಜ್ಯಗಳಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಭರ್ಜರಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಪಟ್ಟಣದ ಹಳೆಯ ಬಸ್ ನಿಲ್ದಾಣದಲ್ಲಿ ಬಿಜೆಪಿ ಕಾರ್ಯಕರ್ತರು ಶಾಸಕ ಸಿಮೆಂಟ್ ಮಂಜು ನೇತೃತ್ವದಲ್ಲಿ ಸೋಮವಾರ ಸಂಜೆ ಸಂಭ್ರಮಾಚರಣೆ ಆಯೋಜಿಸಿದ್ದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಬೇಕೆಂಬ ದಿವಂಗತ ಶ್ಯಾಮ್ ಪ್ರಸಾದ್ ಮುಖರ್ಜಿ ಅವರ ಕನಸು ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರ ಪರಿಶ್ರಮದಿಂದ ಇಂದು ನನಸಾಗಿದೆ ಎಂದು ಹೇಳಿದರು.

ದೇಶಕ್ಕೆ ಸ್ವಾತಂತ್ರ್ಯ ಬಂದ ನಂತರ ಇದೇ ಮೊಟ್ಟ ಮೊದಲ ಬಾರಿಗೆ ಬಿಜೆಪಿ ಬಂಗಾಳದಲ್ಲಿ ಅಧಿಕಾರದ ಗದ್ದುಗೆ ಏರಿರುವುದು ಐತಿಹಾಸಿಕ ಸಾಧನೆ ಎಂದು ಹೇಳಿದರು. ಸುಮಾರು 15 ವರ್ಷಗಳ ಕಾಲ ಆಡಳಿತ ನಡೆಸಿದ ಮಮತಾ ಬ್ಯಾನರ್ಜಿ ಅವರ ಪಕ್ಷದ ಗೂಂಡಾಗಳು ಹಲವಾರು ಬಿಜೆಪಿ ಕಾರ್ಯಕರ್ತರನ್ನು ಹತ್ಯೆ ಮಾಡಿದರೂ ಸಹ, ಗೂಂಡಾಗಿರಿ ಎದುರಿಸಿ ಪಕ್ಷವನ್ನು ಸಂಘಟಿಸಿದ ಪರಿಣಾಮ ಇಂದು ಅಧಿಕಾರಕ್ಕೆ ಬಂದಿದೆ ಎಂದು ತಿಳಿಸಿದರು.

ಇದು ಹಿಂದುತ್ವದ ಹಾಗೂ ರಾಷ್ಟ್ರೀಯತೆಯ ಗೆಲುವು. ಪಕ್ಷದ ಗೆಲುವಿಗೆ ಶ್ರಮಿಸಿದ ಎಲ್ಲಾ ಮುಖಂಡರು ಹಾಗೂ ಕಾರ್ಯಕರ್ತರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದರು.

ಇದೇ ರೀತಿ ಅಸ್ಸಾಂನಲ್ಲಿ ಬಿಜೆಪಿ ಸತತ ಮೂರನೇ ಬಾರಿಗೆ ಅಧಿಕಾರಕ್ಕೇರಿದ್ದು, ಪುದುಚೇರಿಯಲ್ಲಿ ಮಿತ್ರಪಕ್ಷಗಳೊಂದಿಗೆ ಬಿಜೆಪಿ ಸರ್ಕಾರ ರಚಿಸಿದೆ. ಕೇರಳದಲ್ಲಿ ಪ್ರಪ್ರಥಮ ಬಾರಿಗೆ ಬಿಜೆಪಿ ಮೂರು ಸ್ಥಾನಗಳನ್ನು ಗಳಿಸಿದೆ. ದೇಶಾದ್ಯಂತ ರಾಷ್ಟ್ರೀಯ ಚಿಂತನೆ ಬಲವಾಗುತ್ತಿದ್ದು, ಜನರು ಬಿಜೆಪಿ ಪಕ್ಷವನ್ನು ಹೆಚ್ಚಿನ ಸಂಖ್ಯೆಯಲ್ಲಿ ಬೆಂಬಲಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲೂ ಬದಲಾವಣೆ ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಹಳೆಯ ಬಸ್ ನಿಲ್ದಾಣದಲ್ಲಿ ಪ್ರಧಾನಿ ಮೋದಿ ಅವರ ಹೆಸರಿನಲ್ಲಿ ಚುರ್‌ಮುರಿ ಹಾಗೂ ಸಿಹಿ ಹಂಚಿ, ಪಟಾಕಿ ಸಿಡಿಸಿ ಸಂಭ್ರಮಿಸಲಾಯಿತು.

ಬಿಜೆಪಿ ತಾಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವತ್ಥ್, ಟಿಎಪಿಸಿಎಂಎಸ್ ಅಧ್ಯಕ್ಷ ಶಶಿಕುಮಾರ್, ಆಟೋ ರವಿ, ವನಜಾಕ್ಷಿ, ಪ್ರದೀಪ್, ಮೇಘರಾಜ್, ಆಶೀರ್ವಾದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪ್ರಶಸ್ತಿಗಳಿಂದ ಮನುಷ್ಯನಿಗೆ ಅಹಂಕಾರ ಬರಬಾರದು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಪ್ರಶಸ್ತಿಗಳು ಮನುಷ್ಯನಿಗೆ ಅಹಂಕಾರ ತರಬಾರದು ಎಂದು ನಿವೃತ್ತ ಪ್ರಾಧ್ಯಾಪಕ ಎಚ್.ಸಿದ್ದೇಗೌಡ ತಿಳಿಸಿದರು.

ಪಟ್ಟಣದ ಕರ್ನಾಟಕ ಸಂಘದ ಸಭಾಂಗಣದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್‌ನಿಂದ ಆಯೋಜಿಸಿದ್ದ 112ನೇ ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆ ಮತ್ತು ಎಸ್ಎಸ್ಎಲ್ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳಿಗೆ ಕೇವಲ ವೈದ್ಯಕೀಯ ಹಾಗೂ ಅಭಿಯಂತರ ವೃತ್ತಿ ಮಾತ್ರವಲ್ಲ ಇನ್ನೂ ವಿಶಾಲವಾದ ಅವಕಾಶಗಳು ಇದ್ದು ಅವನ್ನು ಬಳಸಿಕೊಳ್ಳಬೇಕು ತಂದೆ ತಾಯಿಗಳ ಶ್ರಮ ಹೆಚ್ಚು ಇರುತ್ತದೆ ವಿನಯವಂತಿಕೆಯನ್ನು ವಿದ್ಯಾರ್ಥಿಗಳು ಕಲಿಯಬೇಕು ಎಂದರು.

2025-26ನೇ ಸಾಲಿನ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಕನ್ನಡ ಭಾಷೆಯಲ್ಲಿ 125 ಅಂಕಗಳಿಗೆ 125 ಅಂಕಗಳನ್ನು ಪಡೆದ 31 ವಿದ್ಯಾರ್ಥಿಗಳು ಹಾಗೂ ಅತಿ ಹೆಚ್ಚು ಅಂಕ ಪಡೆದು ತಾಲೂಕಿಗೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಹಡೇನಹಳ್ಳಿ ಲೋಕೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಚ್.ಸತೀಶ್, ಮಕ್ಕಳ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ಚ.ನ. ಅಶೋಕ್, ಆದಿಶೇಷಕುಮಾರ್, ಟಿಎಪಿಸಿಎಂಎಸ್ ಅಧ್ಯಕ್ಷ ಎಚ್.ಆರ್.ವೆಂಕಟೇಶ್ ಮೂರ್ತಿ ಇತರರಿದ್ದರು.

# ಗಂಗಾ ಕಲ್ಯಾಣ ಯೋಜನೆಗೆ ವಿದ್ಯುತ್ ವಿಳಂಬ: ರೈತರ ಆಕ್ರೋಶ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸಣ್ಣ ನೀರಾವರಿ ಇಲಾಖೆಯ ಗಂಗಾ ಕಲ್ಯಾಣ ಯೋಜನೆಯಡಿ 2023ರಿಂದ ಮಂಜೂರಾದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸದಿರುವುದರಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ದಲಿತ ಮುಖಂಡ ಧರ್ಮರಾಜ್ ಕಲ್ಗಣೆ ಆರೋಪಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ವಿಚಾರದಲ್ಲಿ ಹಾಸನ ಹಾಗೂ ಸಕಲೇಶಪುರ ಸೆಸ್ಕ್ ನಡುವೆ ಹೊಣೆಗಾರಿಕೆ ತಳ್ಳಾಟ ನಡೆಯುತ್ತಿದ್ದು, ಸಮಸ್ಯೆಗೆ ಇನ್ನೂ ಪರಿಹಾರ ಕಂಡುಬಂದಿಲ್ಲ ಎಂದು ಹೇಳಿದರು.

ಸಕಲೇಶಪುರ ಸೆಸ್ಕ್ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹರೀಶ್ ಅವರು, ಈ ಯೋಜನೆಯನ್ನು ಕಮರ್ಷಿಯಲ್ ವರ್ಗದಲ್ಲಿ ಪರಿಗಣಿಸಿ 57 ಸಾವಿರ ರೂ. ಪಾವತಿಸಿ ಮೀಟರ್ ಮೂಲಕ ವಿದ್ಯುತ್ ಸಂಪರ್ಕ ಪಡೆಯುವಂತೆ ಸೂಚಿಸುತ್ತಿದ್ದಾರೆ. ಆದರೆ ಹಾಸನದ ಸಣ್ಣ ನೀರಾವರಿ ಇಲಾಖೆಯ ಅಧಿಕಾರಿ ಶಾಂತಕುಮಾರ್, ಗಂಗಾ ಕಲ್ಯಾಣ ಯೋಜನೆ ಎಸ್‌ಸಿ/ಎಸ್‌ಟಿ ಅನುದಾನದಡಿ ಬರುತ್ತದೆ ಮತ್ತು ಇದು ಕಮರ್ಷಿಯಲ್‌ಗೆ ಸೇರದು ಎಂದು ಸ್ಪಷ್ಟಪಡಿಸಿದ್ದಾರೆ ಎಂದು ತಿಳಿಸಿದರು.

ಈ ಗೊಂದಲದಿಂದಾಗಿ ಸಕಲೇಶಪುರ ಭಾಗದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ತೋಡಲಾದ ಬೋರ್‌ವೆಲ್‌ಗಳು ಬ್ಲಾಕ್ ಆಗುವ ಭೀತಿ ಎದುರಾಗಿದೆ. 2023ರಿಂದ ಸುಮಾರು 30 ಫೈಲ್‌ಗಳು ಬಾಕಿಯಿದ್ದು, ಫಲಾನುಭವಿಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರದ ಅನುದಾನದಲ್ಲಿ ಜಾರಿಯಾಗುವ ಯೋಜನೆಗೆ ರೈತರಿಂದ ಹಣ ವಸೂಲಿ ಮಾಡುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಕ್ರಮ ಕೈಗೊಳ್ಳದಿದ್ದರೆ ಧರಣಿ

ಗಂಗಾಧರ್ ಹೆನ್ಲಿ ಮಾತನಾಡಿ, 2023ರಲ್ಲಿ ಬೋರ್‌ವೆಲ್ ತೋಡಿದರೂ ಇಂದಿಗೂ ಮೋಟಾರ್ ಅಳವಡಿಸಲು ಸಾಧ್ಯವಾಗಿಲ್ಲ. ಅದರಿಂದ ಕೊಳವೆಬಾವಿಗಳು ಬತ್ತುವ ಆತಂಕ ಎದುರಾಗಿದೆ ಎಂದು ಹೇಳಿದರು. ತಕ್ಷಣ ವಿದ್ಯುತ್ ಸಂಪರ್ಕ ಕಲ್ಪಿಸದಿದ್ದರೆ ಚೆಸ್ಕಾಂ ಹಾಗೂ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸುವುದಾಗಿ ಎಚ್ಚರಿಸಿದರು.

ನಾಗರಾಜು ಜಾನಕೆರೆ ಮಾತನಾಡಿ, ಮಲೆನಾಡು ಭಾಗದಲ್ಲಿ ಬೋರ್‌ವೆಲ್‌ಗಳು ಬೇಗ ಬ್ಲಾಕ್ ಆಗುವ ಸಾಧ್ಯತೆ ಹೆಚ್ಚಿದೆ. ಮೂರು ವರ್ಷಗಳಿಂದ ವಿದ್ಯುತ್ ಸಂಪರ್ಕ ನೀಡದಿರುವುದರಿಂದ ಬೋರ್‌ವೆಲ್‌ಗಳು ಹಾಳಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರ ತಕ್ಷಣ ಕ್ರಮ ಕೈಗೊಂಡು ವಿದ್ಯುತ್ ಸಂಪರ್ಕ ಒದಗಿಸಬೇಕು ಎಂದು ಆಗ್ರಹಿಸಿದರು. ಸಮಸ್ಯೆ ಪರಿಹರಿಸದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸಲಾಗುವುದು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಪುಟ್ಟರಾಜು ಬಿರಡಹಳ್ಳಿ, ಮಂಜಯ್ಯ ಕಲ್ಗಣೆ, ಆನಂದ್ ಕುಮಾರ್ ದೊಡ್ಡನಹಳ್ಳಿ, ಪ್ರತಾಪ್ ನೀಡಿಗೆರೆ ಹಾಗೂ ದೇವರಾಜ್ ನೀಡಿಗೆರೆ ಉಪಸ್ಥಿತರಿದ್ದರು.

# ಬೇಲೂರಿಗೆ ಬಿಎಸ್‌ವೈ ಕೊಡುಗೆ ಅಪಾರ: ಶಾಸಕ ಸುರೇಶ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ಶಿಲ್ಪಕಲೆಗಳ ತವರು ಬೇಲೂರು ತಾಲ್ಲೂಕಿನ ಬಯಲು ಸೀಮೆಗೆ ರಣಘಟ್ಟ ಮತ್ತು ಯಗಚಿ ಏತ ನೀರಾವರಿ ಮೂಲಕ ನೀರು ಹರಿಸಲು ಅನುದಾನ ನೀಡಿದ್ದಲ್ಲದೆ ಬೇಲೂರಿನ ಸಮಗ್ರ ಅಭಿವೃದ್ಧಿಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮುನ್ನುಡಿ ಬರೆದಿದ್ದಾರೆ ಎಂದು ಶಾಸಕ ಹೆಚ್.ಕೆ.ಸುರೇಶ್ ಹೇಳಿದರು.

ಪಟ್ಟಣದ ಕೋಟೆ ಶಾಸಕರ ಕಚೇರಿಯಲ್ಲಿ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ರಾಜ್ಯದ 224 ಕ್ಷೇತ್ರಗಳಲ್ಲಿ ಬೇಲೂರು ವಿಧಾನಸಭಾ ಕ್ಷೇತ್ರಕ್ಕೆ ತನ್ನದೇಯಾದ ಮಹತ್ವವಿದೆ. 900 ವರ್ಷಗಳ ಇತಿಹಾಸ ಹೊಂದಿರುವ ಮತ್ತು ಕನ್ನಡಕ್ಕೆ ಪ್ರಥಮ ಶಿಲಾ ಶಾಸನ ನೀಡಿರುವ ಹಲ್ಮಿಡಿ ಗ್ರಾಮ ಇರುವಂತಹ ಈ ತಾಲೂಕಿಗೆ ಅಧಿಕ ಯೋಜನೆಗಳನ್ನು ರೂಪಿಸಿದ ಕೀರ್ತಿ ಯಡಿಯೂರಪ್ಪನವರಿಗೆ ಸೇರುತ್ತದೆ. ಅವರು ನಾಲ್ಕು ಬಾರಿ ಮುಖ್ಯಮಂತ್ರಿಗಳಾಗಿ ನೀಡಿದ ಯೋಜನೆಗಳು ಎಂದಿಗೂ ಕೂಡ ಮಹತ್ವಪೂರ್ಣವಾಗಿದೆ. ರೈತರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದ ಬಿ. ಎಸ್ ಯಡಿಯೂರಪ್ಪ ಹೆಣ್ಣು ಮಕ್ಕಳ ಸಬಲೀಕರಣಕ್ಕಾಗಿ ಭಾಗ್ಯಲಕ್ಷ್ಮಿ ಯೋಜನೆ ಮತ್ತು ವಿದ್ಯಾರ್ಥಿಗಳ ಉತ್ತೇಜನವನ್ನು ನೀಡಲು ಸೈಕಲ್ ಯೋಜನೆ ಸೇರಿದಂತೆ ಹತ್ತಾರು ಯೋಜನೆಗಳನ್ನು ರೂಪಿಸಿ ದೇಶದಲ್ಲಿ ಪ್ರಪ್ರಥಮ ಬಾರಿಗೆ ರೈತಪರ ಬಜೆಟ್ ಅನ್ನು ನೀಡಿದ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ ಎಂದರು.

ಯಡಿಯೂರಪ್ಪ ಅದೃಷ್ಟದಲ್ಲಿ ಮುಖ್ಯಮಂತ್ರಿಗಳಾಗಲಿಲ್ಲ, ಅವರು ಸತತ 50 ವರ್ಷ ರಾಜ್ಯದ ಹಳ್ಳಿ ಹಳ್ಳಿಗೆ ಸೈಕಲ್ ಪ್ರಯಾಣದೊಂದಿಗೆ ಬಿಜೆಪಿಯನ್ನು ಸಂಘಟಿಸಿ ದಕ್ಷಿಣ ಭಾರತದಲ್ಲಿ ಪ್ರಪ್ರಥಮ ಬಾರಿಗೆ ಬಿಜೆಪಿಯ ಅಧಿಕಾರದ ಚುಕ್ಕಾಣಿ ಹಿಡಿಯಲು ಸಹಕಾರವನ್ನು ಮಾಡಿದಂತಹ ಧೀಮಂತ ವ್ಯಕ್ತಿ ಯಡಿಯೂರಪ್ಪನವರಾಗಿದ್ದಾರೆ. ಇಂತಹ ಯಡಿಯೂರಪ್ಪನವರ ಸಾಧನೆ ಅವರ ಯೋಜನೆಗಳು ಇಡೀ ದೇಶದಲ್ಲಿ ಮಹತ್ವ ಹೊಂದಿರುವ ಹಿನ್ನೆಲೆಯಲ್ಲಿ ಚಿತ್ರದುರ್ಗದಲ್ಲಿ ಮೇ 9ರಂದು ಮಾಜಿ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರ ಅಧ್ಯಕ್ಷತೆಯಲ್ಲಿ ಬೃಹತ್ ಅಭಿಮಾನೋತ್ಸವ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮಕ್ಕೆ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಅನೇಕ ಕೇಂದ್ರ ಮಂತ್ರಿಗಳು ಹಾಗೂ ರಾಜ್ಯದ ಎಲ್ಲಾ ಮಾಜಿ ಮಂತ್ರಿಗಳು ಪಕ್ಷಾತೀತವಾಗಿ ಭಾಗವಹಿಸಲಿದ್ದಾರೆ. ವಿಶೇಷವಾಗಿ ಸಾವಿರಕ್ಕೂ ಹೆಚ್ಚು ಗುರುವರ್ಯರು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಮೇ 9ರಂದು ಚಿತ್ರದುರ್ಗದಲ್ಲಿ ನಡೆಯುವ ಬೃಹತ್ ಅಭಿಮಾನೋತ್ಸವಕ್ಕೆ ಬೇಲೂರಿನಿಂದ 5000ಕ್ಕೂ ಹೆಚ್ಚು ಯಡಿಯೂರಪ್ಪನವರ ಅಭಿಮಾನಿ ಬಳಗ ಭಾಗವಹಿಸಲಿದೆ. ಈಗಾಗಲೇ ನೂರು ಬಸ್ಸುಗಳನ್ನು ನಿಗದಿ ಮಾಡಲಾಗಿದೆ. ಪ್ರತಿ ಹಳ್ಳಿ ಹಳ್ಳಿಯಲ್ಲೂ ಕೆಲವರು ವೈಯಕ್ತಿಕವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಬಗ್ಗೆ ನಮಗೆ ತಿಳಿಸಿದ್ದು ಪ್ರತಿಯೊಬ್ಬರೂ ಕೂಡ ಪಕ್ಷಾತೀತವಾಗಿ ಇಂತಹ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರಿಗೆ ಇನ್ನೂ ಹೆಚ್ಚಿನ ಶಕ್ತಿ ದೇವರು ಕರುಣಿಸಲಿ ಎಂದು ಪ್ರಾರ್ಥಿಸಲು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಎಂದು ಕರೆ ನೀಡಿದರು.

ತಾಲ್ಲೂಕು ಬಿಜೆಪಿ ಅಧ್ಯಕ್ಷ ಸಂಜು ಕೌರಿ, ಜೆ.ಕೆ.ಕುಮಾರ್, ನವೀನ್ ಇತರರಿದ್ದರು.

# ಮುದ್ದನಹಳ್ಳಿಯಲ್ಲಿ 250ಕ್ಕೂ ಹೆಚ್ಚು ಬಾಳೆ ಗೊನೆ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಕಷ್ಟಪಟ್ಟು ಬೆಳೆದ ಬಾಳೆ ತೋಟಕ್ಕೆ ಲಗ್ಗೆಯಿಟ್ಟಿರುವ ಕಿಡಿಗೇಡಿಗಳು 250ಕ್ಕೂ ಹೆಚ್ಚು ಬಾಳೆ ಗೊನೆ ಕಳವು ಮಾಡಿರುವ ಘಟನೆ ತಾಲ್ಲೂಕಿನ ಮುದ್ದನಹಳ್ಳಿ ಗ್ರಾಮದಲ್ಲಿ ನಡೆದಿದೆ.

ರೈತ ಚಂದ್ರನಾಯಕ್ ಅವರ ತೋಟದಲ್ಲಿ ಕಳ್ಳತನವಾಗಿದೆ. ಜೊತೆಗೆ ಉಳಿದ ಗಿಡಗಳನ್ನು ಸಂಪೂರ್ಣ ನಾಶಪಡಿಸಿದ್ದಾರೆ. ಮುದ್ದನಹಳ್ಳಿ ಸಮೀಪ ರಸ್ತೆಗೆ ಹೊಂದಿಕೊಂಡಿರುವ 25 ಗುಂಟೆ ಜಮೀನಿನಲ್ಲಿ ಚಂದ್ರನಾಯಕ್ ಒಂದು ವರ್ಷದಿಂದ ಬಾಳೆ ಬೆಳೆದಿದ್ದರು. ಉತ್ತಮ ಆರೈಕೆಯಿಂದ ಬೆಳೆದ ಬೆಳೆ ಈಗ ಕಟಾವು ಹಂತಕ್ಕೆ ತಲುಪಿದ್ದು, ಮಾರುಕಟ್ಟೆಗೆ ಸಾಗಿಸಲು ಸಿದ್ಧವಾಗಿತ್ತು. ಆದರೆ ಇದೇ ಸಮಯದಲ್ಲಿ ದುಷ್ಕರ್ಮಿಗಳು ದಾಳಿ ನಡೆಸಿ ಬೆಳೆ ಕಳವು ಮಾಡಿರುವುದಷ್ಟೇ ಅಲ್ಲದೆ, ಉಳಿದ ಗಿಡಗಳನ್ನು ಸಹ ನಾಶಪಡಿಸಿರುವುದು ರೈತನ ಕನಸಿಗೆ ಭಾರೀ ಹೊಡೆತ ನೀಡಿದೆ.

ಈ ಕುರಿತು ಮಾತನಾಡಿದ ಚಂದ್ರನಾಯಕ್ ಅವರು, ಒಂದು ವರ್ಷದಿಂದ ಕುಟುಂಬದವರ ಜೊತೆ ಕಷ್ಟಪಟ್ಟು



ಬೆಳೆದ ಬಾಳೆಗೆ ಉತ್ತಮ ಬೆಲೆ ಸಿಗುವ ನಿರೀಕ್ಷೆಯಲ್ಲಿದ್ದೆವು. ಕೆಲವೇ ದಿನಗಳಲ್ಲಿ ಕಟಾವು ಮಾಡಿ ಮಂಡಿಗೆ ಹಾಕಬೇಕಿತ್ತು. ದುಷ್ಕೃತ್ಯದಿಂದ ಎಲ್ಲವೂ ನಾಶವಾಗಿದೆ. ನಮ್ಮ ಪರಿಶ್ರಮ ವ್ಯರ್ಥವಾಗಿದೆ ಎಂದು ನೋವು ವ್ಯಕ್ತಪಡಿಸಿದರು. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಮಾಜಕ್ಕೆ ಅನ್ಯಾಯ ಮಾಡಿದ ಬಿಳಿಚೌಡಯ್ಯ: ಆರೋಪ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಬಿಳಿಚೌಡಯ್ಯ ಅವರು ಹಿಂದುಳಿದ ಸಮುದಾಯಗಳನ್ನು ಬಳಸಿಕೊಂಡು ರಾಜಕೀಯ ಹಾಗು ಆರ್ಥಿಕವಾಗಿ ಬೆಳೆದರೆ ಹೊರತು ಸಮಾಜದ ಏಳಿಗೆಗೆ ಯಾವ ಕೊಡುಗೆ ನೀಡಲಿಲ್ಲ ಎಂದು ದುಮ್ಮೇನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಅಮ್ಮನಟೆ ಅಜ್ಜಪ್ಪ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬಿಳಿಚೌಡಯ್ಯ ಅವರು ಹಿಂದುಳಿದ ಸಮುದಾಯಗಳ ಬೆಂಬಲದಿಂದಲೇ ರಾಜಕೀಯವಾಗಿ ಬೆಳೆದರು. ಆದರೆ ಬೆಂಬಲ ನೀಡಿದ ಕುರುಬ, ಯಾದವ, ಲಂಬಾಣಿ ಸೇರಿ ಯಾವ ಸಮುದಾಯಕ್ಕೂ ನೆರವಾಗಲಿಲ್ಲ. ವೈಯಕ್ತಿಕ ಬೆಳವಣಿಗೆಗೆ ನಮ್ಮನ್ನು ಬಳಸಿಕೊಂಡಿದ್ದಾರೆ. ಸಮಾಜದ ನಂಬಿಕೆಯನ್ನು ರಾಜಕೀಯ ಲಾಭಕ್ಕೆ ಬಳಸಿಕೊಂಡಿದ್ದಾರೆಂದರು.

ಈ ಹಿಂದೆ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಸಂದರ್ಭದಲ್ಲಿ ಹಿಂದುಳಿದ ಸಮುದಾಯ ಅವರಿಗೆ ಬೆಂಬಲ ನೀಡಿತ್ತು. ಆದರೆ ಇಂದು ಅವರು ಶಾಸಕರನ್ನು ಹೊಗಳುತ್ತಾ ಸ್ವಾರ್ಥ ರಾಜಕೀಯ ಮುಂದುವರಿಸುತ್ತಿದ್ದಾರೆ. ಸಮಾಜದ ಅಭಿವೃದ್ಧಿಗೆ ಯಾವುದೇ ಯೋಜನೆ ಅಥವಾ ಅವಕಾಶಗಳನ್ನು ಒದಗಿಸುವಲ್ಲಿ ವಿಫಲರಾಗಿದ್ದಾರೆ ಎಂದು ಕಿಡಿಕಾರಿದರು.

ನಗರಸಭೆಯ ಪ್ರಾಧಿಕಾರ ಹುದ್ದೆಗಳ ಆಯ್ಕೆಯಲ್ಲಿ ಸಹ ಹಿಂದುಳಿದ ಸಮುದಾಯದವರಿಗೆ ಅವಕಾಶ ಕಲ್ಪಿಸಬೇಕಾಗಿದ್ದರೂ ಅದು ನಡೆಯದೇ ಇರುವುದನ್ನು ಪ್ರಶ್ನಿಸಿದ ಅವರು, ಚುನಾವಣೆ ಇಲ್ಲದೆ ನೇಮಕವಾಗುವ ಹುದ್ದೆಗಳಲ್ಲಿ ಹಿಂದುಳಿದ ಸಮುದಾಯಕ್ಕೆ ಆದ್ಯತೆ ನೀಡಬೇಕಾಗಿತ್ತು. ಶಾಸಕರ ಸೂಚನೆಯಂತೆ ಅರುಣ್ ಕುಮಾರ್ ಅವರಿಗೆ ಹುದ್ದೆ ನೀಡಲಾಗಿದೆ. ಈ ನೇಮಕಾತಿಯಲ್ಲಿ ಹಣದ ವ್ಯವಹಾರ ನಡೆದಿದೆ ಎಂಬ ಗಂಭೀರ ಆರೋಪಗಳು ಕೇಳಿಬರುತ್ತಿವೆ ಎಂದರು.

ಪ್ರಾಧಿಕಾರದ ಅಧ್ಯಕ್ಷ ಸ್ಥಾನವನ್ನು ಹಿಂದುಳಿದ ಸಮುದಾಯದವರಿಗೆ ನೀಡದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟ ಕೈಗೊಳ್ಳಬೇಕಾಗುತ್ತದೆ. ಸಮಾಜದ ಹಕ್ಕುಗಳನ್ನು ಕಾಪಾಡಲು ನಾವು ಹಿಂದೆ ಸರಿಯುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಜಯರಾಮ್, ಕುರುಬ ಸಮುದಾಯದ ಮಹಾಲಿಂಗಪ್ಪ, ಭರತ್, ಭಾಸ್ಕರ್, ರಂಗಸ್ವಾಮಿ ಇತರರಿದ್ದರು.

# ಮೆಡಿಕಲ್ ಮಫಿಯಾ ತಡೆಗೆ ಶ್ರೀರಾಮ ಸೇನೆ ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರ ಸೇರಿದಂತೆ ಜಿಲ್ಲೆಯಾದ್ಯಂತ ಕೆಲ ಆಸ್ಪತ್ರೆಗಳಲ್ಲಿ ನಡೆಯುತ್ತಿರುವ ಚಿಕಿತ್ಸಾ ಮಾಫಿಯಾಕ್ಕೆ ಕಡಿವಾಣ ಹಾಕಲು ಜಿಲ್ಲಾ ಆರೋಗ್ಯಾಧಿಕಾರಿ ನಿಗಾವಹಿಸುವಂತೆ ಶ್ರೀರಾಮ ಸೇನೆ ಜಿಲ್ಲಾಧ್ಯಕ್ಷ ಧರ್ಮನಾಯಕ್ ಮತ್ತು ನಗರಾಧ್ಯಕ್ಷ ದರ್ಶನ್, ಪ್ರತಿಮಾ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಆರೋಗ್ಯ ಕ್ಷೇತ್ರದಲ್ಲಿ ನಡೆಯುತ್ತಿರುವ ಅವ್ಯವಹಾರಗಳು ಬಡ ಹಾಗೂ ಮಧ್ಯಮ ವರ್ಗದ ಜನರನ್ನು ಆರ್ಥಿಕವಾಗಿ ಕುಗ್ಗಿಸುತ್ತಿದ್ದು, ತಕ್ಷಣ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಸಮರ್ಪಕ ಚಿಕಿತ್ಸೆ ದೊರೆಯುತ್ತಿಲ್ಲ. ಹಲವೆಡೆ ಮುಖ್ಯ ವೈದ್ಯಾಧಿಕಾರಿಗಳು ಕರ್ತವ್ಯ ಸಮಯದಲ್ಲಿ ಇರುವುದಿಲ್ಲ. ಇದರಿಂದ ತುರ್ತು ಪರಿಸ್ಥಿತಿಯಲ್ಲಿರುವ ರೋಗಿಗಳು ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಉಚಿತವಾಗಿ ದೊರೆಯಬೇಕಾದ ಔಷಧಿಗಳನ್ನು ಹೊರಗಿನಿಂದ ಖರೀದಿಸಲು ರೋಗಿಗಳು ಮತ್ತವರ ಕಡೆಯವರಿಗೆ ಒತ್ತಾಯಿಸುವುದು ಸಾಮಾನ್ಯವಾಗಿದೆ. ಇದು ಬಡಜನರಿಗೆ ಹೆಚ್ಚುವರಿ ಹೊರೆ ಆಗುತ್ತಿದೆ ಎಂದು ದೂರಿದರು.

ಖಾಸಗಿ ಆಸ್ಪತ್ರೆಗಳ ವಿರುದ್ಧವೂ ಗಂಭೀರ ಆರೋಪ ಕೇಳಿಬಂದಿದ್ದು, ಅನವಶ್ಯಕ ಎಕ್ಸ್ ರೇ, ಸ್ಕ್ಯಾನಿಂಗ್ ಹಾಗೂ ವಿವಿಧ ಪರೀಕ್ಷೆಗಳ ಹೆಸರಿನಲ್ಲಿ ರೋಗಿಗಳಿಂದ ದುಬಾರಿ ಹಣ ವಸೂಲಿ ಮಾಡಲಾಗುತ್ತಿದೆ. ಸರ್ಕಾರಿ ಆಸ್ಪತ್ರೆಗಳಿಂದ ಹೆಚ್ಚಿನ ಚಿಕಿತ್ಸೆ ಅಗತ್ಯ ಎಂಬ ನೆಪದಲ್ಲಿ ಖಾಸಗಿ ಆಸ್ಪತ್ರೆಗೆ ರೋಗಿಗಳನ್ನು ಕಳುಹಿಸುವುದು ಹೆಚ್ಚಾಗಿದ್ದು, ತುರ್ತು ಪರಿಸ್ಥಿತಿಯಲ್ಲಿರುವ ರೋಗಿಗಳು ಅನಿವಾರ್ಯವಾಗಿ ಖಾಸಗಿ ಆಸ್ಪತ್ರೆಗೆ ದಾಖಲಾಗುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ದೂರಿದರು. ಇದನ್ನೇ ಬಳಸಿಕೊಂಡು ಅತಿಯಾದ ಶುಲ್ಕ ವಿಧಿಸುವುದು ವೈದ್ಯಕೀಯ ನೀತಿಗೆ ವಿರುದ್ಧ ಮತ್ತು ಕಾನೂನುಬಾಹಿರ ಎಂದು ಆರೋಪಿಸಿದರು.

ಚಿಕಿತ್ಸೆ ನಂತರ ಬಿಲ್ ಪಾವತಿ ವೇಳೆ ಅಸಮಂಜಸ ದರ ನಿಗದಿ ಪಡಿಸುವುದರಿಂದ ಆಸ್ಪತ್ರೆ ಮತ್ತು ರೋಗಿಗಳ ಸಂಬಂಧಿಕರ ನಡುವೆ ವಾಗ್ವಾದಗಳು ನಡೆಯುವುದು ಸಾಮಾನ್ಯವಾಗಿದೆ. ಇದು ಆರೋಗ್ಯ ವ್ಯವಸ್ಥೆಯ ಮೇಲಿನ ಜನರ ನಂಬಿಕೆಗೆ ಧಕ್ಕೆ ತರುತ್ತಿದೆ ಎಂದು ಹೇಳಿದರು.

ಆಸ್ಪತ್ರೆಗಳಲ್ಲಿ ಚಿಕಿತ್ಸಾ ವೆಚ್ಚದ ವಿವರಗಳನ್ನು ಕಡ್ಡಾಯವಾಗಿ ರಿಸೆಪ್ಷನ್ ಹಾಲ್‌ನಲ್ಲಿ ಫಲಕಗಳ ಮೂಲಕ ಪ್ರದರ್ಶಿಸಬೇಕು. ರೋಗಿಗಳಿಗೆ ಸರಿಯಾದ ಚಿಕಿತ್ಸೆ ನೀಡದ ವೈದ್ಯರು ಅಥವಾ ದಾದಿಯರ ವಿರುದ್ಧ ಸಾಕ್ಷಿ ಸಮೇತ ದೂರು ಬಂದರೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಹೋಬಳಿ ಮಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪೂರ್ಣ ಕರ್ತವ್ಯ ಸಮಯ ಪಾಲನೆ ಕಡ್ಡಾಯಗೊಳಿಸಬೇಕು. ಸಣ್ಣಪುಟ್ಟ ಕಾಯಿಲೆ ಗಳಿಗೆ ಅನವಶ್ಯಕವಾಗಿ ದುಬಾರಿ ಔಷಧಿಗಳನ್ನು ಹೊರಗಿನಿಂದ ತರಿಸುವ ಪದ್ಧತಿ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಚಿಕಿತ್ಸಾ ವೆಚ್ಚದ ವಿವರಗಳನ್ನು ಸ್ಪಷ್ಟವಾಗಿ ಫಲಕಗಳಲ್ಲಿ ಪ್ರದರ್ಶಿಸುವುದು ಹಾಗೂ ಬಿಲ್ ಪಾವತಿ ಸಮಯದಲ್ಲಿ ನಿಗದಿತ ಮೊತ್ತಕ್ಕೆ ಜಿಎಸ್‌ಟಿ ಬಿಲ್ ನೀಡುವುದು ಕಡ್ಡಾಯವಾಗಬೇಕು ಎಂದು ಒತ್ತಾಯಿಸಿದರು.

# ಮೂರು ರಾಜ್ಯಗಳಲ್ಲಿ ಬಹುಮತ ಬಿಜೆಪಿ ಸಂಭ್ರಮಾಚರಣೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪಂಚರಾಜ್ಯ ಚುನಾವಣೆಯಲ್ಲಿ ಬಿಜೆಪಿ ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಪುದುಚೇರಿಯಲ್ಲಿ ಬಹುಮತ ಪಡೆದ ಹಿನ್ನೆಲೆಯಲ್ಲಿ ಶಾಸಕ ಹೆಚ್.ಕೆ.ಸುರೇಶ್ ನೇತೃತ್ವದಲ್ಲಿ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಪಟಾಕಿ ಸಿಡಿಸಿ ಪಕ್ಷ ಕಾರ್ಯಕರ್ತರು ಸಿಹಿ ಹಂಚಿ ಸಂಭ್ರಮಿಸಿದರು.

ಶಾಸಕ ಹೆಚ್.ಕೆ.ಸುರೇಶ್ ಮಾತನಾಡಿ, ತಮಿಳುನಾಡು, ಕೇರಳ, ಪಶ್ಚಿಮ ಬಂಗಾಳ, ಪುದುಚೇರಿ ರಾಜ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತಾ ಶಾ ನೇತೃತ್ವದಲ್ಲಿ ಎಂದಿಗೂ ಕಾಣದ ರೀತಿಯಲ್ಲಿ ಬಿಜೆಪಿ ಜಯಭೇರಿ ಬಾರಿಸಿದೆ. ವಿಶೇಷವಾಗಿ ಕಳೆದ ಹಲವು ದಶಕಗಳಿಂದ ಪಶ್ಚಿಮ ಬಂಗಾಳ ರಾಜ್ಯದಲ್ಲಿ ಕಮ್ಯುನಿಸ್ಟ್ ಆಡಳಿತ ಮತ್ತು ಮಮತಾ ಬ್ಯಾನರ್ಜಿ ದುರಾಡಳಿತದಿಂದ ಅಲ್ಲಿನ ಹಿಂದೂಗಳ ಅನುಭವಿಸಿದ ನರಕಯಾತನೆ ಹೇಳತೀರದು. ಪಶ್ಚಿಮ ಬಂಗಾಳದಲ್ಲಿ ನಾನೇ ಸುಪ್ರೀಂ ಎಂದ ದೀದಿ ಸರ್ಕಾರವನ್ನು ದಂಡಯಾತ್ರೆ ಮೂಲಕ ಅಲುಗಾಡಿಸಿದೆ. ಅಸ್ಸಾಂ ಮತ್ತು ಪುದುಚೇರಿಯಲ್ಲಿ ಬಿಜೆಪಿ ಜಯಭೇರಿ ಮೂಲಕ ಅಧಿಕಾರದ ಚುಕ್ಕಾಣಿ ಹಿಡಿದು ಇಡೀ ದೇಶವೇ ಕೇಸರಿ ಮಯವಾಗಿದೆ ಎಂದರು.

ಕೇರಳ ಮತ್ತು ತಮಿಳುನಾಡಿನಲ್ಲಿ ಕೂಡ ಬಿಜೆಪಿ ಖಾತೆ ತೆರೆದಿದೆ. ಕಾಂಗ್ರೆಸ್ ಈಗಾಲಾದರೂ ತಮ್ಮ ವಿಳಾಸ ಎಲ್ಲಿ ಎಂದು ಹೇಳಲಿ ಎಂದು ವ್ಯಂಗ್ಯವಾಡಿದ ಅವರು ದಾವಣಗೆರೆ ಮತ್ತು ಬಾಗಲಕೋಟೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಸರ್ಕಾರ ಇಡೀ ಮಂತ್ರಿಗಳು ಮೊಕ್ಕಾಂ ಹೂಡಿದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಜಯಕ್ಕೆ ಕಾರಣವಾಗಿದೆ. ಆದರೆ ಕಳೆದ ಬಾರಿಗಿಂತ ಅತಿ ಹೆಚ್ಚು ಮತ ಪಡೆದ ಬಗ್ಗೆ ತಿಳಿಸಿದರು.

# ಐಸಿಎಸ್‌ಇ ಪರೀಕ್ಷೆಯಲ್ಲಿ ಶೇ. 100 ಫಲಿತಾಂಶ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಸ್ಕಾಲರ್ಸ್ ಇಂಟರ್ ನ್ಯಾಷನಲ್ ಶಾಲೆಯು ಪ್ರಸಕ್ತ ಸಾಲಿನ ಐಸಿಎಸ್‌ಇ ಪರೀಕ್ಷೆಯಲ್ಲಿ ಶೇ. 100 ರಷ್ಟು ಫಲಿತಾಂಶ ಸಾಧಿಸಿದೆ.

ಶಾಲೆಯಲ್ಲಿ ಸೋಮವಾರ ಪರೀಕ್ಷೆ ಬರೆದ 31 ವಿದ್ಯಾರ್ಥಿ ಹಾಗೂ ಪೋಷಕರನ್ನು ಅಭಿನಂದಿಸಲಾಯಿತು. ಶೇ. 97 ಫಲಿತಾಂಶದೊಂದಿಗೆ ವಿದ್ಯಾರ್ಥಿನಿ ವೈ.ಬಿ.ಜನ್ಯ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. 31 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ತೇರ್ಗಡೆಯಾಗಿ ಸಂಸ್ಥೆಯ ಹಿರಿಮೆ ಹೆಚ್ಚಿಸಿದ್ದಾರೆ.

ಶಾಲೆಯ ಆಡಳಿತಾಧಿಕಾರಿ ಡಾ. ಹೆಚ್.ಎನ್.ಚಂದ್ರಶೇಖರ್ ಮಾತನಾಡಿ, ಮಕ್ಕಳ ಸರ್ವಾಂಗೀಣ ಏಳಿಗೆಯ ಉದ್ದೇಶದಿಂದ ಸ್ಕಾಲರ್ಸ್ ಇಂಟರ್ ನ್ಯಾಷನಲ್ ಸ್ಕೂಲ್ ಕೆಲಸ ಮಾಡುತ್ತಿದೆ. ಅಂಕ ಗಳಿಕಗೆ ಮಾತ್ರ ಆದ್ಯತೆ ನೀಡದೆ ವ್ಯಕ್ತಿತ್ವ ವಿಕಸನ, ಪ್ರತಿಭಾನ್ವೇಷಣೆಗೆ ವೇದಿಕೆ ಕಲ್ಪಿಸಲಾಗುತ್ತಿದೆ ಎಂದರು.

# ಇತಿಹಾಸದಲ್ಲಿ ಈ ದಿನ

## ಮೇ-06

1861: ಅಮೆರಿಕದ ಗೃಹಯುದ್ಧದ ಸಂದರ್ಭದಲ್ಲಿ ಅರ್ಕಾನ್ಸಾಸ್ ರಾಜ್ಯವು ಕಾನ್ಫೆಡರೇಟ್‌ಗಳಿಗೆ ಸೇರ್ಪಡೆಯಾಯಿತು.

1937: ಜರ್ಮನಿಯ ಹಿಂಡನ್‌ಬರ್ಗ್ ವಿಮಾನ ದುರಂತ ಸಂಭವಿಸಿ 36 ಮಂದಿ ಮೃತಪಟ್ಟರು.

1954: ರೋಜರ್ ಬ್ಯಾನಿಸ್ಟರ್ 4 ನಿಮಿಷಗಳಲ್ಲಿ ಒಂದು ಮೈಲು ಓಡಿದ ಮೊದಲ ವ್ಯಕ್ತಿಯಾದರು.

1994: ಇಂಗ್ಲಿಷ್-ಫ್ರೆಂಚ್ ಸಹಯೋಗದ ಸಾರ್ವಜನಿಕ ಬಳಕೆಗೆ ತೆರೆಯಲಾಯಿತು.

### ಜನನ

1856: ಸಿಗ್ಮಂಡ್ ಫ್ರಾಯ್ಡ್, ಪ್ರಸಿದ್ಧ ಮನೋವಿಜ್ಞಾನಿ

1915: ಆರ್ಸನ್ ವೆಲ್ಸ್, ಖ್ಯಾತ ಚಲನಚಿತ್ರ ನಿರ್ದೇಶಕ ಮತ್ತು ನಟ

1961: ಜಾರ್ಜ್ ಕ್ಲೂನಿ, ಹಾಲಿವುಡ್ ನಟ

### ನಿಧನ

1910: 7ನೇ ಎಡ್ವರ್ಡ್, ಬ್ರಿಟನ್‌ನ ರಾಜ

2001: ನೌಶಾದ್ ಅಲಿ, ಖ್ಯಾತ ಸಂಗೀತ ನಿರ್ದೇಶಕ

2014: ಫಾರ್ಲಿ ಮೊವಾಟ್, ಕೆನಡಾದ ಲೇಖಕ

# ನೋಂದಣಿ ಪ್ರಕ್ರಿಯೆಯಿಂದ ಜನರಿಗೆ ತೊಂದರೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪಾರದರ್ಶಕ ಹಾಗೂ ತ್ವರಿತ ನೋಂದಣಿ ಉದ್ದೇಶದಿಂದ ಸರ್ಕಾರ ಪೇಪರ್‌ಲೆಸ್ ನೋಂದಣಿ ವ್ಯವಸ್ಥೆ ಜಾರಿಗೊಳಿಸಿದೆಯಾದರೂ ಲೋಪದೋಷಗಳನ್ನು ಸರಿಪಡಿಸದಿದ್ದರೆ ಸಾರ್ವಜನಿಕರಿಗೆ ಭಾರೀ ತೊಂದರೆಯಾಗುತ್ತದೆ ಎಂದು ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಗಿ ಪಡೆದ ಪತ್ರ ಬರಹಗಾರರ ಒಕ್ಕೂಟದ ಜಿಲ್ಲಾ ಜಂಟಿ ಕಾರ್ಯದರ್ಶಿ ಕೃಷ್ಣ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪೇಪರ್ ಲೆಸ್ ಆನ್ ಲೈನ್ ನೋಂದಣಿ ವಿಧಾನದಲ್ಲಿ ಸಾಕಷ್ಟು ಲೋಪದೋಷಗಳಿವೆ. ಅದರಿಂದ ರೈತರು, ಕಂಪ್ಯೂಟರ್, ಅನಕ್ಷರಸ್ಥರಿಗೆ ತೊಂದರೆಯಾಗಲಿದೆ. ಕಳೆದ ತಿಂಗಳು ಚಾಮರಾಜನಗರದಲ್ಲಿ ಯೋಜನೆಗೆ ಪ್ರಾಯೋಗಿಕ ಚಾಲನೆ ನೀಡಲಾಗಿದೆ. ಈ ವಿಧಾನದಿಂದ ಆಸ್ತಿ ದಾಖಲೆಗಳಿಗೆ ಭೌತಿಕ ಪ್ರತಿಗಳು ದೊರೆಯದಿರುವುದು ಭವಿಷ್ಯದಲ್ಲಿ ಗಂಭೀರ ಸಮಸ್ಯೆಗಳಿಗೆ ಕಾರಣವಾಗಬಹುದು. ಡಿಜಿಟಲ್ ಲಾಕರ್‌ನಲ್ಲಿ ಮಾತ್ರ ದಾಖಲೆಗಳು ಉಳಿಯುವುದರಿಂದ ವಾರಸುದಾರರಿಗೆ ಮಾಹಿತಿ ದೊರೆಯದ ಅಪಾಯವಿದೆ ಎಂದು ಎಚ್ಚರಿಸಿದರು.

ಅಲ್ಲದೆ ಆನ್‌ಲೈನ್ ಮೂಲಕವೇ ಮುದ್ರಾಂಕ ಹಾಗೂ ನೋಂದಣಿ ಶುಲ್ಕ ಪಾವತಿಸಬೇಕಾಗಿದ್ದು, ಯಾವುದಾದರೂ ಕಾರಣದಿಂದ ನೋಂದಣಿ ಪ್ರಕ್ರಿಯೆ ಪೂರ್ಣಗೊಳ್ಳದಿದ್ದರೆ ಹಣವನ್ನು ಮರಳಿ ಪಡೆಯಲು ಅವಕಾಶ ಇಲ್ಲದಿರುವುದು ಸಾರ್ವಜನಿಕರಿಗೆ ಆರ್ಥಿಕ ಹೊರೆ ಉಂಟುಮಾಡುತ್ತಿದೆ. ಜೊತೆಗೆ ಹೆಚ್ಚುವರಿಯಾಗಿ ಸೇವಾ ಶುಲ್ಕ ಸೇರಿಸಲಾಗಿದೆ ಎಂದು ಆರೋಪಿಸಿದರು.

ಪೇಪರ್‌ಲೆಸ್ ವ್ಯವಸ್ಥೆಯಲ್ಲಿ ಭೌತಿಕ ಸಹಿ ಇಲ್ಲದೆ ಇ-ಸಹಿ ಮೂಲಕ ವ್ಯವಹಾರ ನಡೆಯುವುದರಿಂದ ಅನಕ್ಷರಸ್ಥರು ಮೋಸಕ್ಕೆ ಒಳಗಾಗುವ ಸಾಧ್ಯತೆ ಹೆಚ್ಚಿದೆ. ಇದೇ ವೇಳೆ ಸಾಕ್ಷಿದಾರರ ಓಟಿಪಿ ಪ್ರಕ್ರಿಯೆ, ಹಾಜರಾತಿ ಸಮಸ್ಯೆಗಳು ನೋಂದಣಿ ವಿಳಂಬಕ್ಕೆ ಕಾರಣವಾಗುತ್ತಿವೆ ಎಂದರು.

ಈ ವ್ಯವಸ್ಥೆ ಭೂ ಮಾಫಿಯಾ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಸಾಧ್ಯತೆ ಇದೆ. ಮೊಬೈಲ್ ಹ್ಯಾಕಿಂಗ್ ಮತ್ತು ಓಟಿಪಿ ಮೋಸ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಡಿಜಿಟಲ್ ನೋಂದಣಿ ವ್ಯವಸ್ಥೆ ಭದ್ರತೆಯ ಕುರಿತು ಪ್ರಶ್ನೆಗಳು ಉದ್ಭವಿಸುತ್ತಿವೆ ಎಂದು ವಿವರಿಸಿದರು.

ಬ್ಯಾಂಕ್ ಸಾಲ ಪಡೆಯಲು ಭೌತಿಕ ದಾಖಲೆಗಳ ಅಗತ್ಯವಿರುವುದರಿಂದ ಪೇಪರ್‌ಲೆಸ್ ವ್ಯವಸ್ಥೆ ಅನನುಕೂಲ ಉಂಟುಮಾಡುತ್ತಿದೆ. ವಿಲ್ ಪತ್ರಗಳನ್ನು ಗುಪ್ತವಾಗಿ ಇಡುವ ವ್ಯವಸ್ಥೆಯೂ ಇಲ್ಲದಿರುವುದು ಮತ್ತೊಂದು ಸಮಸ್ಯೆಯಾಗಿದೆ ಎಂದು ತಿಳಿಸಿದರು.

ಸರ್ಕಾರ ಈ ಎಲ್ಲಾ ಸಮಸ್ಯೆ ಅವಲೋಕಿಸಿ ಸಮಸ್ಯೆ ಸರಿಪಡಿಸಿಬೇಕು. ಇಲ್ಲದಿದ್ದರೆ ಹೋರಾಟ ನಡೆಸಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಜಯರಾಮ್, ಸತೀಶ್, ತುಳಸಿದಾಸ್, ಸತ್ಯನಾರಾಯಣ್, ಎಂ.ಆರ್.ರಂಗಶೆಟ್ಟಿ ಇದ್ದರು.

# ಚಿತ್ರ ಕಲಾವಿದ ಬಿ.ಎಸ್.ದೇಸಾಯಿ ನಾಡು ಕಂಡ ಅದ್ಭುತ ಪ್ರತಿಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಕಳೆದ ನಾಲ್ಕು ದಶಕಗಳಿಂದ ಬಣ್ಣದ ಲೋಕದಲ್ಲಿ ಅವಿಶ್ರಾಂತವಾಗಿ ದುಡಿಯುತ್ತಿರುವ ಅಂತರಾಷ್ಟ್ರೀಯ ಚಿತ್ರಕಲಾವಿದ ಬಿ.ಎಸ್.ದೇಸಾಯಿ ನಾಡು ಕಂಡ ಅದ್ಭುತ ಪ್ರತಿಭೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಗೌರವಾಧ್ಯಕ್ಷ ರವಿ ನಾಕಲಗೂಡು ಅಭಿಪ್ರಾಯಪಟ್ಟರು.

ಕರ್ನಾಟಕ ಲಲಿತ ಕಲಾ ಅಕಾಡೆಮಿ ಗೌರವ ಪುರಸ್ಕಾರಕ್ಕೆ ಆಯ್ಕೆಯಾಗಿರುವ ಬಿ.ಎಸ್.ದೇಸಾಯಿ ಅವರಿಗೆ ವಿವಿಧ ಸಂಘಟನೆಗಳ ವತಿಯಿಂದ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ದೇಸಾಯಿ ಜಿಲ್ಲೆಯ ಹೆಮ್ಮೆ. ಉತ್ತರ ಕರ್ನಾಟಕದಿಂದ ಬಂದು ಹಾಸನದಲ್ಲಿ ನೆಲೆನಿಂತಿ ಹಾಸನವನ್ನೇ ಹೊದ್ದು ಇಲ್ಲಿನ ಸಾವಿರಾರು ಮಕ್ಕಳ ಬಣ್ಣದ ಲೋಕಕ್ಕೆ ಮೆರಗು ನೀಡಿ ಚಿತ್ರಕಲಾ ಕ್ಷೇತ್ರಕ್ಕೆ ಅದ್ವಿತೀಯ ಕೊಡುಗೆ ನೀಡಿದ್ದಾರೆ ಎಂದು ಬಣ್ಣಿಸಿದರು.

ಸಾಹಿತಿ ಚಲಂ ಹಾಡ್ಲಹಳ್ಳಿ ಮಾತನಾಡಿ, ಬಿ.ಎಸ್.ದೇಸಾಯಿ ನಮ್ಮ ನಡುವಿನ ಸಾಧಕ ಪ್ರತಿಭೆ. ಹಾಸನಕ್ಕೆ ಬಂದಾಗ ಅವರ ಬದುಕು ಅಷ್ಟೊಂದು ಸುಲಭವಾಗಿರಲಿಲ್ಲ. ಸಾಕಷ್ಟು ಏಳು ಬೀಳುಗಳನ್ನು ಅನುಭವಿಸುತ್ತಾ ಸಾಧನೆಗೈದಿದ್ದಾರೆ. ಕೇವಲ ಅವರಷ್ಟೇ ಬೆಳೆಯದೇ ಸಾವಿರಾರು ವಿದ್ಯಾರ್ಥಿಗಳನ್ನು ಬಣ್ಣದ ಲೋಕಕ್ಕೆ ಪರಿಚಯಿಸಿದ್ದಾರೆ. ಇವರು ಕೇವಲ ಚಿತ್ರಕಲೆಗೆ ಸೀಮಿತವಾಗದೇ ಸಾಹಿತ್ಯ, ಸಾಂಸ್ಕೃತಿಕ, ಪ್ರಾಕೃತಿಕ, ಸಾಮಾಜಿಕವಾಗಿ ಅನೇಕ ಚಳವಳಗಳಲ್ಲಿ ಸಕ್ರಿಯವಾಗಿ ಎಲ್ಲರೊಂದಿಗೆ ಒಳಗೊಳ್ಳುವಿಕೆ ನಮಗೆಲ್ಲಾ ಆದರ್ಶವಾಗಿದೆ. ಹುಣಸಿನಕೆರೆ ಉಳಿವಿಗಾಗಿ ಹೋರಾಟದ ನೇತೃತ್ವ ವಹಿಸಿ ಸಾಮಾದಾಯಿಕ ಕೈಂಕರ್ಯ ಮಾಡಿದ್ದಾರೆ ಎಂದರು.

ಕೇದ್ರ ಕನ್ನಡ ಸಾಹಿತ್ಯ ವೇದಿಕೆ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್ ಮಾತನಾಡಿ, ಬಿ.ಎಸ್.ದೇಸಾಯಿ ಅವರು ಹಾಸನದ ಬಹುತೇಕ ಕ್ಷೇತ್ರಗಳ ಒಡನಾಟವನ್ನು ಹೊಂದಿ ಇಲ್ಲಿಯ ಪ್ರಗತಿಗೆ ನಿರಂತರವಾಗಿ ಶ್ರಮಿಸಿದ್ದಾರೆ. ಅವರ ತಾಯಿ ಕೌದಿ ಕಲೆಯನ್ನು ತುಂಬಾ ಪ್ರಾವಿಣ್ಯತೆ ಹೊಂದಿದ್ದರು. ಕಲೆ ಎಂಬುದು ವಂಶಪಾರರ್ಯವಾಗಿ ಸಾಗಿ ಬಂದಿದೆ. ಒಬ್ಬ ಚಿತ್ರಕಲಾ ಶಿಕ್ಷಕರಾಗಿ, ರಂಗಭೂಮಿ ಕಲಾವಿದರಾಗಿ, ಬರಹಗಾರರಾಗಿ, ಸಾಮಾಜಿಕ ಹೋರಾಟಗಾರರಾಗಿ ಹಾಸನ ಜಿಲ್ಲೆಯಲ್ಲಿ ತಮ್ಮದೇಯಾದ ಛಾಪನ್ನು ಮೂಡಿಸಿರುವ ದೇಸಾಯಿಯವರ ಕೊಡುಗೆ ಅಮೋಘವಾದುದು. ಅವರ ಜೀವಮಾನ ಸಾಧನೆಯನ್ನು ಗುರುತಿಸಿ ಸರ್ಕಾರ ಲಲಿತಕಲಾ ಅಕಾಡೆಮಿ ಗೌರವ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ಕಲಾಕ್ಷೇತ್ರಕ್ಕೆ ಸಂದ ಗೌರವವಾಗಿದೆ ಎಂದರು.

ಭಾರತ್ ಸ್ಕೌಟ್ಸ್-ಗೈಡ್ಸ್ ಜಿಲ್ಲಾ ಮುಖ್ಯ ಆಯುಕ್ತ ಡಾ.ವೈ.ಎಸ್.ವೀರಭದ್ರಪ್ಪ, ಪ್ರೈಡ್ ವಿಜ್ಞಾನ ಪದವಿ ಪೂರ್ವ ಕಾಲೇಜಿನ ಕಾರ್ಯದರ್ಶಿ ಸುರೇಶ್ ಗುರೂಜಿ, ಪತ್ರಕರ್ತ ಎ.ವಿಜಯಕುಮಾರ್, ಮಲ್ನಾಡ್ ಕಾಲೇಜಿನ ಹಿರಿಯ ಉಪನ್ಯಾಸಕ ಜಿ.ಮಂಜುನಾಥ್, ಎ.ವಿ.ಕೆ. ಕಾಲೇಜಿನ ಉಪನ್ಯಾಸಕ ಪ್ರಕಾಶ್, ಜಿಲ್ಲಾ ತರಬೇತಿ ಆಯುಕ್ತ ಎಂ.ಎಸ್.ಪ್ರಕಾಶ್, ಹಿರಿಯ ಗೈಡ್ ಕ್ಯಾಪ್ಟನ್ ಎಚ್.ಜಿ.ಕಾಂಚನಮಾಲ, ಗೈಡ್ ಆಯುಕ್ತೆ ಜಯರಮೇಶ್, ಸ್ಕೌಟ್ಸ್ ಆಯುಕ್ತ ಸ್ಟೀಫನ್ ಪ್ರಕಾಶ್, ಜಿಲ್ಲಾ ಸಹಾಯಕ ಆಯುಕ್ತೆ ಪ್ರೇಮಾ ಪ್ರಕಾಶ್ ಇತರರಿದ್ದರು.

# ಪ್ರತ್ಯೇಕ ಅವಘಡದಲ್ಲಿ ಇಬ್ಬರ ಸಾವು

ಹಾಸನ: ಜಿಲ್ಲೆಯ ವಿವಿಧೆಡೆ ಸಂಭವಿಸಿದ ಪ್ರತ್ಯೇಕ ಅವಘಡದಲ್ಲಿ ಇಬ್ಬರು ಮೃತಪಟ್ಟಿದ್ದಾರೆ.

ಚಾಲಕನ ನಿರ್ಲಕ್ಷ್ಯದಿಂದ ಕಾರು ಪಲ್ಟಿಯಾಗಿ ವ್ಯಕ್ತಿ ಮೃತಪಟ್ಟಿರುವ ಘಟನೆ ಚನ್ನರಾಯಪಟ್ಟಣ ತಾಲ್ಲೂಕಿನ ಕತ್ತರಿಘಟ್ಟ ಗೇಟ್ ಸಮೀಪ ನಡೆದಿದೆ. ಬೆಂಗಳೂರಿನ ದೀಪನ್ವಿತ್ ಮೃತರು. ಧರ್ಮಸ್ಥಳದಿಂದ ಬೆಂಗಳೂರಿಗೆ ಹೋಗುತ್ತಿದ್ದಾಗ ಚಾಲಕ ಆನಂದ್ ಗುರು ಅವರು ವೇಗ ಹಾಗೂ ನಿರ್ಲಕ್ಷ್ಯದಿಂದ ಓಡಿಸಿದ ಪರಿಣಾಮ ರಸ್ತೆ ಪಕ್ಕದ ಮೈಲಿಗಲ್ಲಿಗೆ ಡಿಕ್ಕಿಯಾಗಿ ಕಾರು ನಾಲ್ಕು ಬಾರಿ ಪಲ್ಟಿಯಾಗಿದೆ. ಅಪಘಾತದಲ್ಲಿ ಗಂಭೀರ ಗಾಯಗೊಂಡಿದ್ದ ದೀಪನ್ವಿತ್ ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಚಾಲಕನಿಗೆ ಗಾಯಗಳಾಗಿವೆ. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಮನೆಯ ಹೆಂಚು ಬದಲಿಸುತ್ತಿದ್ದಾಗ ಕಾವಕೋಲು ಹಾಗೂ ಮರದ ಪಟ್ಟಿಗಳು ಮುರಿದು ವ್ಯಕ್ತಿ ಮೃತಪಟ್ಟಿರುವ ಘಟನೆ ಅರಕಲಗೂಡು ತಾಲ್ಲೂಕಿನ ಕೊಡಕಳ್ಳಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಅಂಚರ್ ಸ್ವಾಮಿಗೌಡ ಮೃತರು. ಏ. 25ರಂದು ಅದೇ ಊರಿನ ಪುಟ್ಟೇಗೌಡ ಎಂಬುವವರ ಮನೆಯ ಹೆಂಚು ಬದಲಿಸುವ ಕೆಲಸಕ್ಕೆ ಹೋಗಿದ್ದಾಗ ಅವಘಡ ಸಂಭವಿಸಿದೆ. ಕಾವಕೋಲಿನ ಮೇಲೆ ಕುಳಿತು ಹಳೆಯ ಹೆಂಚು ಬದಲಿಸುತ್ತಿದ್ದಾಗ ರುವಾಗ ಹಳೆಯದ್ದಾಗಿದ್ದ ಕಾವಕೋಲು ಹಾಗು ರಿಪೀಸ್ ಪಟ್ಟಿಗಳು ಮುರಿದು 8 ಅಡಿ ನೆಲಕ್ಕೆ ಬಿದ್ದಿದ್ದಾರೆ. ಗಂಭೀರ ಗಾಯಗೊಂಡಿದ್ದ ಅವರನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆಗೆ ಸ್ಪಂದಿಸದೆ ಏ. 3ರಂದು ಸಾವನ್ನಪ್ಪಿದ್ದಾರೆ. ಅರಕಲಗೂಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248